ಕರ್ನಾಟಕ ಸರ್ಕಾರ ಸಿ ಆರ್ ಪಿ ಸಿ 67
ಹೇಳಿಕೆ ಹಾಳೆ
(ಆರ್.ಪಿ.ಸಂಖ್ಯೆ **57**)
ನಮೂನೆ ಸಂಖ್ಯೆ 4

**2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸಿಂಧನೂರು.**

**ಸಿ.ಸಿ.ನಂ.575/2023**

| | | | |
|---|---|---|---|
| ಸಾಕ್ಷಿದಾರರ ಹೆಸರು | ಅಂಬಣ್ಣ | | |
| ತಂದೆಃಹೆಸರು | ಹನುಮಂತಪ್ಪ | ಪಿಡಬ್ಲೂಃ | **04** |
| ವಯಸ್ಸು | **75** ವರ್ಷ | ಸಿಡಬ್ಲೂಃ | **03** |
| ಉದ್ಯೋಗಃ | ವ್ಯವಸಾಯ | | |
| ವಾಸ ಸ್ಥಳಃ | ಸೋಮಲಾಪುರ. | | |

ದಿನಾಂಕ 21-01-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.
ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದ-

ಈ ದಿನ ನ್ಯಾಯಾಲಯದಲ್ಲಿ 2 ರಿಂದ 4 ನೇ ಆರೋಪಿಯು ಗೈರು ಹಾಜರಾಗಿದ್ದು, ಆರೋಪಿ ಪರ ವಕೀಲರು ಕಲಂ 317 ಸಿ.ಆರ್.ಪಿ.ಸಿ. ಅಡಿಯಲ್ಲಿ ಅರ್ಜಿಯನ್ನು ದಾಖಲಿಸಿ, ಗುರುತಿಸುವ ವಿಚಾರದಲ್ಲಿ ತಕರಾರು ಇಲ್ಲ ಎಂದು ನುಡಿದಿದ್ದರಿಂದ, ಈ ಕೆಳಕಂಡಂತೆ ಸಾಕ್ಷಿಯ ವಿಚಾರಣೆ ತೆಗೆದುಕೊಳ್ಳಲಾಯಿತು.

ಸಾಕ್ಷಿಗೆ ನಿಪಿ-2 ನ್ನು ತೋರಿಸಲಾಗಿ, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-2 ಬಿ ಎಂದು ಗುರುತಿಸಲಾಯಿತು.

ನಾನು ಹುಸೇನಪ್ಪ ರವರ ಹೊಲದ ಹತ್ತಿರ ಹೋಗಿದ್ದೆ, ಆ ಕಾಲಕ್ಕೆ ಸಹಿ ಮಾಡಿದ್ದೆ. ನಿಪಿ-2 ಕ್ಕೆ ಸಹಿಯನ್ನು ಏತಕ್ಕಾಗಿ ಮಾಡಿದೆ ಎಂಬುದು ನನಗೆ ಗೊತ್ತಿಲ್ಲ. ನಿಪಿ-2 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿಲ್ಲ. ಪೋಟೋಗಳನ್ನು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

ಪಾಟೀ ಸವಾಲುಃಃ ಮಾನ್ಯ ಸ ಸ ಅ ರವರಿಂದಃ-

ದಿಃ 05.11.2022 ರಂದು ಸಂಜೆ .4 ರಿಂದ 5 ಗಂಟಯೆವರೆಗೆ ನಿಮ್ಮ & ಚಾಸಾ-2 ರವರ ಸಮಕ್ಷಮ ಘಟನಾ ಸ್ಥಳದಲ್ಲಿ ನಿಪಿ-2 ರಂತೆ ಸ್ಥಳ ಪಂಚನಾಮೆ ಮಾಡಿ, 1 ಕಟ್ಟಿಗೆ ಹಿಡಿಕೆಯನ್ನು ಮತ್ತು ಕಬ್ಬಿಣದ ಕುಡುಗೋಲನ್ನು ವಶಕ್ಕೆ ಪಡೆದಿದ್ದರು ಎಂದರೆ ಸರಿಯಲ್ಲ.

ನಿಪಿ-2 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಮು.ಮಾ ಗಳನ್ನು ತೋರಿಸಿದ್ದು ಸಾಕ್ಷಿಯು ನನಗೆ ಗೊತ್ತಿಲ್ಲ ನಾನು ನೋಡಿಲ್ಲ ಎಂದು ನುಡಿದಿರುತ್ತಾರೆ.

ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ-ಇಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇದೆ.

**C/c 2** ನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಸಿಂಧನೂರು.